ಶಿವಮೊಗ್ಗ ಜಿಲ್ಲೆಯಲ್ಲಿ ರೇಷ್ಮೆ ಇಲಾಖೆಗೆ ಬಿಡುಗಡೆ ಮಾಡಿದ ಹಣ

2035 (2452) : ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ರೇಷ್ಮೆ ಇಲಾಖೆಗೆ ಎಷ್ಟು ಹಣ ಖರ್ಚು ಮಾಡುತ್ತಿದ್ದೀರಾ?

(ಆ) ಶಿವಮೊಗ್ಗ ತಾಲ್ಲೂಕು ಗಾಜನೂರು ಗ್ರಾಮದಲ್ಲಿ ರೇಷ್ಮೆ ಇಲಾಖೆ ಇರುವ ಕಟ್ಟಡದಲ್ಲಿ ಯಾವ ಯಾವ ಇಲಾಖೆಗಳು ಕೆಲಸ ಮಾಡುತ್ತಿವೆ?

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ರೇಷ್ಮೆ ಬೆಳೆಯುವ ರೈತರಿಗೆ ಯಾವ ರೀತಿ ಅನುಕೂಲವಾಗುತ್ತಿದೆ?

ಶ್ರೀ ಎಂ. ಮಹದೇವ್ (ರೇಷ್ಮೆ ಮತ್ತು ಜವಳಿ ಸಚಿವರು) :

(ಅ) 1999-2000ರ ಸಾಲಿಗೆ ಶಿವಮೊಗ್ಗ ಜಿಲ್ಲೆಯಲ್ಲಿ ರೇಷ್ಮೆ ಅಭಿವೃದ್ಧಿ ರೂ.19.00 ಲಕ್ಷಗಳನ್ನು ಖರ್ಚು ಮಾಡಲಾಗಿದೆ.

(ಆ) ಶಿವಮೊಗ್ಗ ತಾಲ್ಲೂಕು ಗಾಜನೂರು ಗ್ರಾಮದಲ್ಲಿ ರೇಷ್ಮೆ ಇಲಾಖೆಯ ಕಟ್ಟಡದಲ್ಲಿ ಈ ಕೆಳಕಂಡ ಕಛೇರಿಗಳು ಕೆಲಸ ಮಾಡುತ್ತಿವೆ.

1. ರೀಲಿಂಗ್ ಕಾಂಪ್ಲೆಕ್ಸ್
2. ರೇಷ್ಮೆ ಬಿತ್ತನೆ ಕೋಠಿ

(ಇ) ಶಿವಮೊಗ್ಗ ಜಿಲ್ಲೆಯಲ್ಲಿ ರೇಷ್ಮೆ ಕೃಷಿಯನ್ನು ಅಭಿವೃದ್ಧಿ ಪಡಿಸಲು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಪ್ರಗತಿಯಲ್ಲಿದೆ. ರಾಜ್ಯ ಮತ್ತು ಜಿಲ್ಲಾವಲಯ ಯೋಜನೆಯಡಿ ರೇಷ್ಮೆ ಕೃಷಿ ಬಗ್ಗೆ ಕ್ಷೇತ್ರೋತ್ಸವ, ಕಾರ್ಯಾಗಾರಗಳು, ವಸ್ತು ಪ್ರದರ್ಶನ, ದ್ವಿತಳಿಗೂಡಿಗೆ ಪ್ರೋತ್ಸಾಹ, ರೇಷ್ಮೆ ಬೆಳಗಾರರ ಮನೆಗಳನ್ನು ಸೋಂಕು ನಿವಾರಕಗಳಿಂದ ಶುದ್ದೀಕರಿಸಲು ರೋಗ ನಿಯಂತ್ರಣ ಕಾರ್ಯಕ್ರಮ, ರೇಷ್ಮೆಹುಳು ಸಾಕಣೆಯಲ್ಲಿ ರೆಂಬೆ ಪದ್ದತಿಗೆ ಪ್ರೋತ್ಸಾಹ ಹಾಗೂ ಸಹಾಯಧನ ನೀಡುವುದು, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಅರ್ಹ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೇಷ್ಮೆ ಬೆಳೆಗಾರರಿಗೆ ಪ್ರತ್ಯೇಕ ಮನೆ ನಿರ್ಮಾಣಕ್ಕೆ ಸಹಾಯಧನ, ರೇಷ್ಮೆಹುಳು ಸಾಕುವ ಸಲಕರಣೆ, ಸರಬರಾಜು ಇತ್ಯಾದಿ ಸವಲತ್ತುಗಳನ್ನು ಒದಗಿಸಲಾಗುತ್ತಿದೆ. ಪೈಲೆಟ್ ಕಾರ್ಯಕ್ರಮದಡಿ ಸಿಎಸ್ಆರ್ ದ್ವಿತಳಿ ಸಂಕೀರಣ ರೇಷ್ಮೆ ಮೊಟ್ಟೆಗಳನ್ನು ಪ್ರಗತಿಪರ ಮೊಟ್ಟೆಗಳಿಗೆ ಸರಾಸರಿ ಇಳುವರಿ ಹೆಚ್ಚಿಸಿ ಹೆಚ್ಚಿನ ಆದಾಯ ಪಡೆಯುವಂತೆ ಮಾಡಲಾಗುತ್ತಿದೆ. ಇದಲ್ಲದೆ ಸೆರಿ-2000 ಯೋಜನೆಯಡಿ ತರಬೇತಿ ಕಾರ್ಯಕ್ರಮ, ಕೆಟಲಿಟಿಕ್ ಅಭಿವೃದ್ಧಿ ಕಾರ್ಯಕ್ರಮದಡಿ ರೇಷ್ಮೆಹುಳು ಸಾಕುವ ಮನೆಗೆ ಸಹಾಯಧನ ಹಾಗೂ ಹಿಪ್ಪುನೇರಲೆಯಲ್ಲಿ ಹನಿ ನೀರಾವರಿ ಅಳವಡಿಸುವವರಿಗೆ ಸಹಾಯಧನವನ್ನು ನೀಡಲಾಗುತ್ತಿದೆ.